858. **ಶ್ರೀ ಸಿದ್ದು ಸವದಿ:-** ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಮಖಂಡಿ ತಾಲ್ಲೂಕಿನಲ್ಲಿ ಕಾಯ್ದಿಟ್ಟ ಒಟ್ಟು ಅರಣ್ಯ ಪ್ರದೇಶವೆಷ್ಟು;

(ಆ) ಹಾಗಿದ್ದಲ್ಲಿ, ಅರಣ್ಯ ಪ್ರದೇಶವನ್ನು ಅತಿಕ್ರಮಣ ಮಾಡಿದ ಪ್ರದೇಶವೆಷ್ಟು; ಉಳಿದ ಅರಣ್ಯ ಪ್ರದೇಶವೆಷ್ಟು;

(ಇ) ಉಳಿದ ಅರಣ್ಯ ಪ್ರದೇಶವನ್ನು ರಕ್ಷಣೆ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಪ್ರತಿ ದಿನ ಅರಣ್ಯ ಪ್ರದೇಶ ಒತ್ತುವರಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈಗಾಗಲೇ ಅಕ್ರಮವಾಗಿ ಅರಣ್ಯ ಪ್ರದೇಶವನ್ನು ಉಪಯೋಗಿಸುವವರಿಗೆ ಸಕ್ರಮಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ?

ಶ್ರೀ ಸಿ. ಚನ್ನಿಗಪ್ಪ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):-

(ಅ) ಜಮಖಂಡಿ ತಾಲ್ಲೂಕಿನಲ್ಲಿ ಒಟ್ಟು 10,816.962 ಹೆಕ್ಟೇರ್ ಅರಣ್ಯ ಪ್ರದೇಶವಿರುತ್ತದೆ.

(ಆ) 299.67 ಹೆಕ್ಟೇರ್ ಅರಣ್ಯ ಪ್ರದೇಶ ಒತ್ತುವರಿಯಾಗಿರುತ್ತದೆ. ಉಳಿದ ಅರಣ್ಯ ಪ್ರದೇಶ 10,517.292 ಹೆಕ್ಟೇರ್

(ಇ) ಅರಣ್ಯ ಒತ್ತುವರಿಯನ್ನು ತಡೆಯಲು ಅರಣ್ಯ ಕಾಯ್ದೆಯಂತೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

(ಈ) –ಇಲ್ಲ–

(ಉ) 1978 ಕ್ಕಿಂತ ಮೊದಲಿನ ಅರಣ್ಯ ಒತ್ತುವರಿಗಳನ್ನು ಸಕ್ರಮಗೊಳಿಸುವ ಕಾರ್ಯ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

770. **ಶ್ರೀ ವಾಟಾಳ್ ನಾಗರಾಜ್:-** ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಇರುವ ಅರಣ್ಯ ಪ್ರದೇಶಗಳೆಷ್ಟು;

(ಆ) ಯಾವ ಯಾವ ಅರಣ್ಯ ಪ್ರದೇಶಗಳಲ್ಲಿ ಗಣಿಗಾರಿಕೆ ನಡೆಯುತ್ತಿದೆ;

(ಇ) ಯಾವ ಯಾವ ರೀತಿಯ ಖನಿಜಗಳನ್ನು ಗಣಿಯಿಂದ ತೆಗೆಯುತ್ತಾರೆ;